# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತನಾಲ್ಕನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ:06ನೇ ಫೆಬ್ರವರಿ, 2018**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೊದಲನೆಯ ಹಾಗೂ ಎರಡನೆಯ ಪಟ್ಟಿಯ ರೀತ್ಯಾ)

### 03. ಕಾರ್ಯದರ್ಶಿಯವರ ವರದಿ

**ಕಾರ್ಯದರ್ಶಿಯವರು:** -

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯಲ್ಲಿ ಮಂಡಿಸುವುದು.

### 04. ವರದಿಯನ್ನೊಪ್ಪಿಸುವುದು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** (ಅಧ್ಯಕ್ಷರು, ಕರ್ನಾಟಕ ವಿಧಾನ ಪರಿಷತ್ತಿನ ವಿಶೇಷ ಸದನ ಸಮಿತಿ) ಅವರು ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳಿಗೆ ಕಾಲ್ಪನಿಕ ವೇತನ ನಿಗದಿಪಡಿಸುವ ಕುರಿತು ಪುನರ್ ಪರಿಶೀಲಿಸಲು ರಚಿಸಲಾದ ವಿಶೇಷ ಸದನ ಸಮಿತಿಯ ವರದಿಯನ್ನು ಒಪ್ಪಿಸುವುದು.

......2

## ೦೫. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ಅ)“೨೦೧೮ನೇ ಫೆಬ್ರವರಿ, ೦೫ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ” ಎಂದು **ಶ್ರೀ ಎಸ್.** ರವಿ ಅವರು ಸೂಚಿಸುವುದು;

ಆ) **ಡಾ: ಜಯಮಾಲ ರಾಮಚಂದ್ರ** ಅವರು ಅನುಮೋದಿಸುವುದು.

## ೦೬. ಗಮನ ಸೆಳೆಯುವ ಸೂಚನೆಗಳು

ಅ) **ಕ್ಯಾಪ್ಟನ್ ಗಣೇಶ್ ಕಾರ್ಣಿಕ್** ಅವರು ಬಾಲ ಸೇವಿಕಾ ತರಬೇತಿ ಪಡೆದು ನರ್ಸರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲಾ ಶಿಕ್ಷಕಿಯರಾಗಿ ಸೇವೆ ಸಲ್ಲಿಸುತ್ತಿರುವವರಿಗೂ ಸಹ ಅನುದಾನಿತ ನೌಕರರಿಗೆ ನೀಡುತ್ತಿರುವಂತೆ ನಿವೃತ್ತಿ ಸೌಲಭ್ಯಗಳನ್ನು ಒದಗಿಸುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರ** ಗಮನ ಸೆಳೆಯುವುದು.

ಆ) **ಶ್ರೀ ಐವನ್ ಡಿ'ಸೋಜಾ** ಅವರು ರಾಜ್ಯದಲ್ಲಿರುವ ಅಡಿಕೆ ಬೆಳೆಗಾರರ ಸಮಸ್ಯೆಗಳಿಗೆ ಹಾಗೂ ಅಡಿಕೆ ಬೆಳೆಗೆ ಆಗುವ ತೊಂದರೆಗಳಿಗೆ ಅಡಿಕೆ ಬೆಳೆಗಾರರ ಮಂಡಳಿಯನ್ನು ರಚಿಸುವ ಬಗ್ಗೆ **ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ** ಸಚಿವರ ಗಮನ ಸೆಳೆಯುವುದು.

## ೦೭. ನಿಯಮ ೩೩೦ರ ಮೇರೆಗೆ

ಅ) **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಕಂದಾಯ ಇಲಾಖೆಯ ಗ್ರಾಮ ಮಟ್ಟದ ಗ್ರಾಮಕರಣೀಕರ ಕಛೇರಿಯಲ್ಲಿನ ಮೂಲ ಸೌಕರ್ಯದ ಕೊರತೆ, ಸ್ವಂತ ಕಟ್ಟಡಗಳಿಲ್ಲದೆ ಇರುವುದು ಹಾಗೂ ಸಿಬ್ಬಂದಿ ಕೊರತೆಯಿಂದಾಗಿ ಗ್ರಾಮದ ಕಛೇರಿಯಲ್ಲಿ ಸಾರ್ವಜನಿಕ ಸೇವೆಯಲ್ಲಿ ವಿಳಂಬ ನೀತಿ ಸೇರಿದಂತೆ ಇಲಾಖೆಯಲ್ಲಿನ ಸಮಸ್ಯೆಗಳು ಮತ್ತು ಆಡಳಿತಾತ್ಮಕ ವಿಷಯಗಳಲ್ಲಿನ ಲೋಪದ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಕಂದಾಯ ಸಚಿವರು)**

.....2

ಆ) **ಶ್ರೀ ಕೆ.ಟಿ. ಶ್ರೀಕಂಠೇಗೌಡ** ಅವರು ರಾಜ್ಯದಲ್ಲಿನ ಎಲ್ಲಾ ಮಾದರಿಯ ಖಾಸಗಿ ಶಾಲೆಗಳಲ್ಲಿ ಕನ್ನಡ ಭಾಷಾ ಬೋಧನೆಯನ್ನು ಕಡ್ಡಾಯಗೊಳಿಸಿದ್ದು, ಈ ಬಗ್ಗೆ ಖಚಿತಪಡಿಸಿಕೊಳ್ಳಲು ಸಮಿತಿಯನ್ನು ರಚಿಸುವುದು ಮತ್ತು ನಿಯಮವನ್ನು ಉಲ್ಲಂಘನೆ ಮಾಡುವ ಶಾಲೆಗಳಿಗೆ ದಂಡವನ್ನು ವಿಧಿಸುವ ಜೊತೆಗೆ ಮಾನ್ಯತೆಯನ್ನು ರದ್ದುಪಡಿಸುವಂತಹ ಕಠಿಣವಾದ ನಿಯಮಗಳನ್ನು ಜಾರಿಗೊಳಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು)**

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ(ಪ್ರ)**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**